# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1419 |
| ಸದಸ್ಯರ ಹೆಸರು | : | ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 22.08.2025. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಪ್ರತಿ ಗ್ರಾಮ ಪಂಚಾಯಿತಿಗೆ ಹೆಚ್ಚಿನ ಅನುದಾನ ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ; ಪ್ರಸ್ತುತ ಒದಗಿಸುತ್ತಿರುವ ಅನುದಾನ ಎಷ್ಟು; (ಮಾಹಿತಿ ನೀಡುವುದು) | ಪ್ರತಿ ಗ್ರಾಮ ಪಂಚಾಯಿತಿಗೆ ಹೆಚ್ಚಿನ ಅನುದಾನ ಒದಗಿಸುವ ಯೋಜನೆ ಪ್ರಸ್ತುತ ಸರ್ಕಾರದ ಮುಂದಿರುವುದಿಲ್ಲ.<br><br>ಗ್ರಾಮ ಪಂಚಾಯತಿಗಳು, ತಾಲ್ಲೂಕು ಪಂಚಾಯತಿಗಳು ಮತ್ತು ಜಿಲ್ಲಾ ಪಂಚಾಯತಿಗಳು ಆರ್ಥಿಕವಾಗಿ ಸಧೃಢವಾಗಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಹಣಕಾಸು ಆಯೋಗಗಳ ಶಿಫಾರಸ್ಸಿನನ್ವಯ ಅನುದಾನ ನೀಡಲಾಗುತ್ತಿದೆ.<br><br>ರಾಜ್ಯ ಹಣಕಾಸು ಆಯೋಗದ ಶಿಫಾರಸ್ಸಿನಂತೆ ಗ್ರಾಮ ಪಂಚಾಯತಿಗಳಿಗೆ ವಾರ್ಷಿಕವಾಗಿ ಸರಾಸರಿ ಶಾಸನಬದ್ಧ ಅನುದಾನವಾಗಿ ರೂ:20.00 ಲಕ್ಷಗಳ ಅನುದಾನ ನೀಡಲಾಗುತ್ತಿದೆ. 2025-26ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 2515-00-198-1-07-300ರಡಿಯಲ್ಲಿ ರೂ.1261.03 ಕೋಟಿಗಳನ್ನು ನಿಗಧಿಪಡಿಸಲಾಗಿದ್ದು, ಪ್ರಸ್ತುತ ಎರಡು ತ್ರೈಮಾಸಿಕ ಕಂತುಗಳಲ್ಲಿ ಅನುದಾನ ಬಿಡುಗಡೆ ಮಾಡಲಾಗಿದೆ.<br><br>ಕೇಂದ್ರ 15ನೇ ಹಣಕಾಸು ಆಯೋಗದ ಅನುದಾನವನ್ನು ಶೇ.90ರಷ್ಟು ಜನಸಂಖ್ಯೆ ಮತ್ತು ಶೇ.10ರಷ್ಟು ಭೌಗೋಳಿಕ ಪ್ರದೇಶದ ಆಧಾರದ ಮೇಲೆ ಬಿಡುಗಡೆಗೊಳಿಸಲಾಗುತ್ತಿದ್ದು, ಪ್ರತಿ ಗ್ರಾಮ ಪಂಚಾಯತಿಗೆ ಸರಾಸರಿ ರೂ:15 ಲಕ್ಷಗಳ ಅನುದಾನ ನೀಡಲಾಗುತ್ತಿದೆ. 2025-26ನೇ ಸಾಲಿಗೆ 15ನೇ ಹಣಕಾಸು ಆಯೋಗದ ಅನುದಾದಡಿ ಗ್ರಾಮ ಪಂಚಾಯಿತಿಗಳಿಗೆ ರೂ. 2186.20 ಕೋಟಿಗಳು ಹಂಚಿಕೆಯಾಗಿರುತ್ತದೆ.<br><br>ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಪ್ರತಿ ಗ್ರಾಮ ಪಂಚಾಯಿತಿಯಲ್ಲಿನ ಕಾರ್ಮಿಕ ಆಯವ್ಯಯ ಆಧರಿಸಿ ಅನುದಾನ ನೀಡಲಾಗುತ್ತಿದೆ. |

| | | |
|---|---|---|
| (ಆ) | ಪಂಚಾಯಿತಿ ಮನೆಗಳ ಹಂಚಿಕೆ ಕಡಿಮೆಯಾಗಿದ್ದರಿಂದ ರಾಜ್ಯದಲ್ಲಿ ವಸತಿ ರಹಿತರ ಸಂಖ್ಯೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಮತ್ತು ಪ್ರಸ್ತುತ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಪಂಚಾಯಿತಿಗಳಿಗೆ ಹಂಚಿಕೆಯಾದ ಮನೆಗಳ ಸಂಖ್ಯೆ ಎಷ್ಟು? (ಮಾಹಿತಿ ನೀಡುವುದು) | 2018ರಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ವಸತಿ/ನಿವೇಶನರಹಿತರ ಸಮೀಕ್ಷೆ ಕೈಗೊಳ್ಳಲಾಯಿತು. ಸದರಿ ಸಮೀಕ್ಷೆಯನ್ವಯ ರಾಜ್ಯದಲ್ಲಿ 1714946 ವಸತಿರಹಿತರು 703976 ನಿವೇಶನರಹಿತರು ಕಂಡು ಬಂದಿರುತ್ತಾರೆ.<br><br>ಪ್ರಸ್ತುತ ಸಾಲಿನಲ್ಲಿ ರಾಜ್ಯ ವಸತಿ ಯೋಜನೆಗಳಡಿ ಯಾವುದೇ ಹೊಸ ಮನೆಗಳ ಗುರಿಯನ್ನು ನಿಗದಿಪಡಿಸಿರುವುದಿಲ್ಲ. ಮುಂಬರುವ ಆಯವ್ಯಯದಲ್ಲಿ ನಿಗದಿಪಡಿಸಬಹುದಾದ ಹೊಸ ಮನೆಗಳ ಗುರಿಗೆ ಅನುಗುಣವಾಗಿ ಉತ್ತರ ಕನ್ನಡ ಜಿಲ್ಲೆಯ ಪಂಚಾಯಿತಿಗಳಿಗೆ ನಿಯಮಾನುಸಾರ ಮನೆಗಳ ಗುರಿ ನಿಗದಿಪಡಿಸುವ ಬಗ್ಗೆ ಪರಿಶೀಲಿಸಲಾಗುವುದು. |

**ಸಂಖ್ಯೆ:** ಗ್ರಾಅಪ 642 ಗ್ರಾಪಂಅ 2025

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು